ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANC**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 18

# ಕಲ್ಯಾಣ ಕರ್ನಾಟಕ ವಿಕಾಸಕ್ಕೆ ಸಂಕಲ್ಪ

18/9/20

ಸಂ.ಕ. ಸಮಾಚಾರ, ಕಲಬುರಗಿ

- 150 ಕೋಟಿ ವೆಚ್ಚದಲ್ಲಿ ಜಯದೇವ ಆಸ್ಪತ್ರೆ ಕಟ್ಟಡ
- ಯಾದಗಿರಿಯಲ್ಲಿ ಬಲ್ಕ್ ಡ್ರಗ್ ಪಾರ್ಕ್
- ಕೊಪ್ಪಳದಲ್ಲಿ ಗೊಂಬೆ ತಯಾರಿಕಾ ಕ್ಲಸ್ಟರ್
- ರಾಯಚೂರಿನಲ್ಲಿ ಜಲವಿದ್ಯುತ್ ಯೋಜನೆ

ಆರು ಜಿಲ್ಲೆಗಳನ್ನೊಳಗೊಂಡ 'ಕಲ್ಯಾಣ ಕರ್ನಾಟಕ' ಸಮಗ್ರ ಅಭಿವೃದ್ಧಿಗೆ ಹೊಸ ಆಯಾಮ ನೀಡಲು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸಂಕಲ್ಪ ಮಾಡಿದ್ದಾರೆ.

'ಕಲ್ಯಾಣ ಕರ್ನಾಟಕ' ಉತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 1100 ಕೋಟಿ ರೂ. ಮೊತ್ತದ ಕ್ರಿಯಾ ಯೋಜನೆ ಸಿದ್ಧಪಡಿಸಲಾಗುತ್ತಿದೆ. ಇದೇ ವೇಳೆ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕೃತಿಕ ಸಂಘಕ್ಕೆ 300 ಕೋಟಿ ರೂ. ಬಜೆಟ್‌ನಲ್ಲಿ ಕಾಯ್ದಿರಿಸಲಾಗಿದೆ ಎಂದರು.

ಬೆಂಗಳೂರಿನ ಜಯದೇವ ಆಸ್ಪತ್ರೆಯ ಶಾಖಾ ಕಟ್ಟಡವನ್ನು ನಗರದಲ್ಲಿ ನಿರ್ಮಿಸಲಾಗುತ್ತಿದ್ದು ಯಾದಗಿರಿಯಲ್ಲಿ 'ಬಲ್ಕ್ ಡ್ರಗ್ ಪಾರ್ಕ್' ಸ್ಥಾಪಿಸಲಾಗುತ್ತಿದೆ ಎಂದರು.

ಕೊಪ್ಪಳದಲ್ಲಿ ವಿಶ್ವ ಮಟ್ಟದ ಗೊಂಬೆ ತಯಾರಿಕಾ ಕ್ಲಸ್ಟರ್ ಸ್ಥಾಪಿಸಲಾಗುತ್ತಿದೆ. ಹಾಗೆಯೇ ಕಲ್ಯಾಣ ಕರ್ನಾಟಕ ಅಭ್ಯರ್ಥಿಗಳು ಐಎಎಸ್, ಐಪಿಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗೆ ತರಬೇತಿ ಪಡೆದುಕೊಳ್ಳಲು ಬೆಂಗಳೂರಿನಲ್ಲಿ 'ವಿದ್ಯಾರ್ಥಿ ಭವನ' ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

ರಾಯಚೂರು ಜಿಲ್ಲೆಯ ಗೋಣಾಸುರದಲ್ಲಿ 1200 ಮೆಗಾ ವ್ಯಾಟ್ ಸಾಮರ್ಥ್ಯದ ಜಲ ವಿದ್ಯುತ್ ಘಟಕ ಸ್ಥಾಪನೆಯ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಈ ಯೋಜನೆ ಕುರಿತಂತೆ ನೆರೆಯ ತೆಲಂಗಾಣದೊಂದಿಗೆ ಮಾತುಕತೆ ನಡೆದಿದೆ ಎಂದರು. ಬಸವಕಲ್ಯಾಣದಲ್ಲಿ ಅನುಭವ ಮಂಟಪ ನಿರ್ಮಾಣ ಕಾರ್ಯ ನಾಲ್ಕು ತಿಂಗಳಲ್ಲಿ ಆರಂಭವಾಗಲಿದೆಯೆಂದರು.

ಡಿಸಿಎಂ ಗೋವಿಂದ ಕಾರಜೋಳ, ಸಂಸದ ಡಾ.ಉಮೇಶ ಜಾಧವ, ವಿಧಾನಸಭೆ ಪ್ರತಿಪಕ್ಷದ ಮುಖ್ಯ ಸಚೇತಕ ಡಾ. ಅಜಯ್ ಸಿಂಗ್, ಕೆಕೆಆರ್‌ಡಿಬಿ ಅಧ್ಯಕ್ಷ ದತ್ತಾತ್ರೇಯ ಪಾಟೀಲ್ ರೇವೂರ, ಈಶಾನ್ಯ ಸಾರಿಗೆ ಸಂಸ್ಥೆ ಅಧ್ಯಕ್ಷ ರಾಜಕುಮಾರ ಪಾಟೀಲ್ ತೇಲ್ಕೂರ ಪಾಲ್ಗೊಂಡಿದ್ದರು.